## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಹಾಗೂ ಕರ್ನಾಟಕ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಗಳಡಿ ರಾಜ್ಯದ ಆಯ್ದ ಗ್ರಾಮ ಪಂಚಾಯಿತಿ ಕೇಂದ್ರಸ್ಥಾನಗಳಲ್ಲಿ ವಿವಿಧ ಯೋಜನೆಗಳ ಹೋರ್ಡಿಂಗ್ಸ್‌ಗಳನ್ನು ವಿನ್ಯಾಸಿಸಿ, ತಯಾರಿಸಿ, ವಿನಾಯಿಲ್ ಪಾರದರ್ಶಿಕೆಗಳನ್ನು ಅಳವಡಿಸುವ ಬಗ್ಗೆ ಟೆಂಡರ್ ಪರಿಶೀಲನಾ ಸಮಿತಿಯನ್ನು ರಚಿಸುವ ಕುರಿತು.

ಉಲ್ಲೇಖ: ಮಾಹಿತಿ ಶಿಕ್ಷಣ ಮತ್ತು ಸಂವಹನ ಕುರಿತಂತೆ ದಿನಾಂಕ: 10-11-2014 ರಂದು ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ.

ಪ್ರಸ್ತಾವನೆ:-

ಮಾಹಿತಿ ಶಿಕ್ಷಣ ಮತ್ತು ಸಂವಹನ ಕುರಿತಂತೆ ದಿನಾಂಕ: 10-11-2014 ರಂದು ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ ಕಂಡಿಕೆ 5.2 ಪ್ರಕಾರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಹಾಗೂ ಕರ್ನಾಟಕ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಗಳಡಿ, ರಾಜ್ಯದ ಆಯ್ದ ಗ್ರಾಮ ಪಂಚಾಯಿತಿ ಕೇಂದ್ರಸ್ಥಾನಗಳಲ್ಲಿ ವಿವಿಧ ಯೋಜನೆಗಳ ಹೋರ್ಡಿಂಗ್ಸ್‌ಗಳನ್ನು ವಿನ್ಯಾಸಿಸಿ, ತಯಾರಿಸಿ, ವಿನಾಯಿಲ್ ಪಾರದರ್ಶಿಕೆಗಳನ್ನು ಅಳವಡಿಸುವ ಬಗ್ಗೆ ಟೆಂಡರ್ ಪರಿಶೀಲನಾ ಸಮಿತಿ ಪ್ರಾಧಿಕಾರವನ್ನು ಕೆ.ಟಿ.ಪಿ.ಪಿ ಅಧಿನಿಯಮದ ಪ್ರಕರಣ 10ರನ್ವಯ ರಚಿಸಬೇಕಾಗಿದೆ.

ಆದುದರಿಂದ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/1073/ಉಖಾಯೋ/2014 ಬೆಂಗಳೂರು. ದಿನಾಂಕ: 23-02-2015</u>**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಹಾಗೂ ಕರ್ನಾಟಕ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಗಳಡಿ, ರಾಜ್ಯದ ಆಯ್ದ ಗ್ರಾಮ ಪಂಚಾಯಿತಿ ಕೇಂದ್ರಸ್ಥಾನಗಳಲ್ಲಿ ವಿವಿಧ ಯೋಜನೆಗಳ ಹೋರ್ಡಿಂಗ್ಸ್‌ಗಳನ್ನು ವಿನ್ಯಾಸಿಸಿ, ತಯಾರಿಸಿ, ವಿನಾಯಿಲ್ ಪಾರದರ್ಶಿಕೆಗಳನ್ನು ಅಳವಡಿಸುವ ಕುರಿತು ಟೆಂಡರ್ ಪರಿಶೀಲನಾ ಸಮಿತಿ ಪ್ರಾಧಿಕಾರವನ್ನು ಕೆ.ಟಿ.ಪಿ.ಪಿ ಅಧಿನಿಯಮದ ಪ್ರಕರಣ 10ರನ್ವಯ ರಚಿಸಿ ಈ ಕೆಳಕಂಡಂತೆ ಆದೇಶಿಸಿದೆ;

| ಕ್ರ. ಸಂ. | ಅಧಿಕಾರಿಯ ಪದನಾಮ | ಸ್ಥಾನಮಾನ |
|---|---|---|
| 1 | ಮುಖ್ಯ ಕಾರ್ಯಾಚರಣೆ ಅಧಿಕಾರಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. | ಅಧ್ಯಕ್ಷರು |
| 2 | ನಿರ್ದೇಶಕರು,(ಪಂಚಾಯತ್ ರಾಜ್-2), ಗ್ರಾಅ ಮತ್ತು ಪಂ ರಾಜ್ ಇಲಾಖೆ | ಸದಸ್ಯರು |
| 3 | ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಅ ಮತ್ತು ಪಂ ರಾಜ್ ಇಲಾಖೆ | ಸದಸ್ಯರು |
| 4 | ಜಂಟಿ ನಿರ್ದೇಶಕರು (ಆಡಳಿತ) ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. | ಸದಸ್ಯರು |
| 5 | ಸಾರ್ವಜನಿಕ ಸಂಪರ್ಕಾಧಿಕಾರಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. | ಸದಸ್ಯರು |
| 6 | ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. | ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯ ಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ್ ಪೋತಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ

1. ಮಹಾಲೇಖಪಾಲಕರು, ಕರ್ನಾಟಕ ಸರ್ಕಾರ, ಬೆಂಗಳೂರು/ಧಾರವಾಡ.
2. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು.
3. ಸಂಬಂಧಿಸಿದ ಅಧಿಕಾರಿಗಳಿಗೆ.

ಪ್ರತಿಯನ್ನು ಈ ಕೆಳಕಂಡವರ ಮಾಹಿತಿಗಾಗಿ ಸಲ್ಲಿಸಿದೆ.

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು. ಇವರ ಆಪ್ತ ಕಾರ್ಯದರ್ಶಿಗಳು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು. ಇವರ ಆಪ್ತ ಕಾರ್ಯದರ್ಶಿಗಳು
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಇ-ಆಡಳಿತ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಆಸುಇ (ಆಡಳಿತ ಸುಧಾರಣೆ), ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
7. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
8. ಆಯುಕ್ತರು, ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ.
9. ಆಯುಕ್ತರು, ಕರ್ನಾಟಕ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆ ಕಾವೇರಿ ಭವನ, ಬೆಂಗಳೂರು.
10. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
11. ಅಪರ ಕಾರ್ಯದರ್ಶಿ/ಉಪಕಾರ್ಯದರ್ಶಿ(ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ.
12. ನಿರ್ದೇಶಕರು, (ಪಂರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ.
13. ಅಪರ ನಿರ್ದೇಶಕರು, ಸ್ವಚ್ಛ ಭಾರತ ಮಿಷನ್, ಕಾವೇರಿ ಭವನ, ಬೆಂಗಳೂರು.
14. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ .
15. ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
16. ಉಪ ನಿರ್ದೇಶಕರು (ಹಣಕಾಸು), ಕರ್ನಾಟಕ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆ ಕಾವೇರಿ ಭವನ, ಬೆಂಗಳೂರು.
17. ಜಂಟಿ ನಿರ್ದೇಶಕರು (ಆಡಳಿತ/ತಾಂತ್ರಿಕ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
18. ವಿಶೇಷ ಅಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರಿಗೆ ಮಾಹಿತಿಗಾಗಿ ಹಾಗೂ ಸದರಿ ಆದೇಶವನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
19. ಮೆ॥ ಇಫಿಯಾ ಟೆಕ್ನಾಲಜೀಸ್ ಇಂಡಿಯಾ ಪ್ರೈವೇಟ್ ಲಿ. ಇವರ ಮಾಹಿತಿಗಾಗಿ ಹಾಗೂ ಸದರಿ ಆದೇಶವನ್ನು ತಮ್ಮ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
20. ಮುಖ್ಯ ಸಂಪಾದಕರು ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಮಾಹಿತಿಗಾಗಿ ಹಾಗೂ ಸದರಿ ಆದೇಶವನ್ನು ಮುಂದಿನ ಸಂಚಿಕೆಯಲ್ಲಿ ಕರ್ನಾಟಕ ವಿಕಾಸದಲ್ಲಿ ಪ್ರಕಟಿಸಲು ಕೋರಿದೆ.
21. ಹೆಚ್ಚುವರಿ ಪ್ರತಿ ಹಾಗೂ ಮಹಾ ಕಡತ.